# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆಡ್ಕರ್ ಸಂಸ್ಥೆಗೆ ಸಂಬಂಧಪಟ್ಟಂತೆ ಜಿಲ್ಲಾ ಮಟ್ಟದ ಫಲಾನುಭವಿಗಳ ಆಯ್ಕೆ ಸಮಿತಿ ಪುನರ್ ರಚಿಸುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ಇವರ ಪ್ರಸ್ತಾವನೆ ದಿನಾಂಕ: 22-06-2016.

ಪ್ರಸ್ತಾವನೆ:-

ಮೇಲೆ ಓದಲಾದ ದಿನಾಂಕ: 22-06-2016ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಇವರು ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯು ಹಮ್ಮಿಕೊಂಡಿರುವ ವಿವಿಧ ಯೋಜನೆಗಳಿಗೆ ಫಲಾನುಭವಿಗಳ ಆಯ್ಕೆ ಮಾಡಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೆಳಕಂಡಂತೆ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಿ ಸರ್ಕಾರದ ಆದೇಶ ಸಂಖ್ಯೆ: ಸಕಇ 172 ಎಸ್‌ಡಿಸಿ 2012, ದಿನಾಂಕ: 30-08-2012 ರಲ್ಲಿ ಹೊರಡಿಸಲಾಗಿತ್ತು.

1) ಜಿಲ್ಲಾಧಿಕಾರಿಗಳು – ಅಧ್ಯಕ್ಷರು
2) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು – ಉಪಾಧ್ಯಕ್ಷರು
3) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು – ಸದಸ್ಯರು
4) ಜಿಲ್ಲಾ ವ್ಯವಸ್ಥಾಪಕರು ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮ – ಸದಸ್ಯರು
5) ಜಿಲ್ಲಾ ಸಂಯೋಜಕರು ಡಾ॥ ಬಾಬು ಜಗಜೀವನರಾಂ ಚರ್ಮ ಕೈಗಾರಿಕ ಅಭಿವೃದ್ಧಿ ನಿಗಮ – ಸದಸ್ಯ ಕಾರ್ಯದರ್ಶಿಗಳು

ಇದಲ್ಲದೇ ಸರ್ಕಾರದ ಆದೇಶ ಸಂಖ್ಯೆ: ಸಕಇ 37 ಎಸ್‌ಎಲ್‌ಪಿ 2015, ದಿನಾಂಕ: 09-09-2015 ರಲ್ಲಿ ಡಾ॥ ಬಾಬು ಜಗಜೀವನ ರಾಂ ವಸತಿ ಕಾರ್ಯಗಾರ ನಿರ್ಮಾಣ ಯೋಜನೆಗೆ ಸಂಬಂಧಪಟ್ಟಂತೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲಾಗಿದೆ.

1) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು – ಅಧ್ಯಕ್ಷರು
2) ಸಂಬಂಧಿಸಿದ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು – ಸದಸ್ಯರು
3) ಆಡ್ಕರ್ ಜಿಲ್ಲಾ ಸಂಯೋಜಕರು – ಸದಸ್ಯ ಕಾರ್ಯದರ್ಶಿಗಳು

ಆಡ್ಕರ್ ಸಂಸ್ಥೆಗೆ ಸಂಬಂಧಪಟ್ಟಂತೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಈ ಕೆಳಕಂಡ ಕಾರಣಗಳಿಂದ ವಿಳಂಬವಾಗುತ್ತಿದೆ ಎಂದು ತಿಳಿಸಿರುತ್ತಾರೆ.

1) ಜಿಲ್ಲಾಧಿಕಾರಿಗಳು ಬಹಳಷ್ಟು ಜಿಲ್ಲಾ ಮಟ್ಟದ ಸಮಿತಿಗಳಿಗೆ ಅಧ್ಯಕ್ಷರಾಗಿರುವುದರಿಂದ ಮತ್ತು ಕೆಲಸದ ಒತ್ತಡ ಅತ್ಯಂತ ಹೆಚ್ಚಾಗಿರುವುದರಿಂದ ಆಯ್ಕೆ ಸಮಿತಿ ಸಭೆ ನಡೆಸಲು ದಿನಾಂಕ ನಿಗದಿ ಪಡಿಸುವಲ್ಲಿ ವಿಳಂಬವಾಗುತ್ತಿದೆ.
2) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳೂ ಸಹ ಕೆಲಸದ ಒತ್ತಡವಿರುವುದರಿಂದ ಸಮಿತಿ ಸಭೆಗೆ ದಿನಾಂಕ ನಿಗಧಿಪಡಿಸುವಲ್ಲಿ ವಿಳಂಬವಾಗುತ್ತಿದೆ.
3) ಆಡ್ಕರ್ ವಸತಿ ಕಾರ್ಯಗಾರ ನಿರ್ಮಾಣ ಯೋಜನೆಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿಗಳು ಇರುವುದರಿಂದ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿದೆ.

ಆಡ್ಕರ್ ನಿಗಮದ 198ನೇ ಮಂಡಳ ಸಭೆಯಲ್ಲಿ ಫಲಾನುಭವಿಗಳ ಆಯ್ಕೆ ವಿಳಂಬವಾಗದ ರೀತಿಯಲ್ಲಿ ನಡೆಸಲು ಮತ್ತು ಯೋಜನೆಗಳನ್ನು ಆಯಾಯ ವರ್ಷಗಳಲ್ಲಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಈಗಿರುವ ಜಿಲ್ಲಾಧಿಕಾರಿಗಳ ಸಮಿತಿ ಬದಲಾಗಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು / ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಬಹುದೆಂದು ಸರ್ವಾನುಮತದಿಂದ ಮಂಡಳ ಒಪ್ಪಿಗೆ ನೀಡಿರುತ್ತದೆ.

ಆದ್ದರಿಂದ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಅನುಕೂಲವಾಗುವಂತೆ ಈ ಕೆಳಕಂಡ ಸದಸ್ಯರನ್ನು ಒಳಗೊಂಡಂತೆ ನೂತನ ಜಿಲ್ಲಾ ಆಯ್ಕೆ ಸಮಿತಿಯನ್ನು ರಚಿಸಿ ಅಧಿಸೂಚನೆ ಹೊರಡಿಸಬೇಕೆಂದು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| | |
|---|---|
| 1) ಜಂಟಿ ನಿರ್ದೇಶಕರು/ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ | – ಸಮಿತಿ ಅಧ್ಯಕ್ಷರು |
| 2) ಜಿಲ್ಲಾ ವ್ಯವಸ್ಥಾಪಕರು ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮ | – ಸದಸ್ಯರು |
| 3) ಜಿಲ್ಲಾ ಸಂಯೋಜಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ | – ಸದಸ್ಯ ಕಾರ್ಯದರ್ಶಿ |

ಮೇಲೆ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವು ಹಮ್ಮಿಕೊಂಡಿರುವ ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಈಗಿರುವ ವ್ಯವಸ್ಥೆಯ ಬದಲಾಗಿ ಮೇಲ್ಕಂಡಂತೆ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ರಚಿಸಿ ಆದೇಶ ಹೊರಡಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ

***<u>ಸರ್ಕಾರಿ ಆದೇಶ ಸಂಖ್ಯೆ: ಸಕಇ 263 ಎಸ್‌ಎಲ್‌ಪಿ 2016, ಬೆಂಗಳೂರು, ದಿನಾಂಕ: 30-08-2016</u>***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವು ಹಮ್ಮಿಕೊಂಡಿರುವ ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಈಗಿರುವ ಆಯ್ಕೆ ಸಮಿತಿಯ ಬದಲಾಗಿ ಈ ಕೆಳಕಂಡಂತೆ ಷರತ್ತುಗಳಿಗೊಳಪಟ್ಟು ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ರಚಿಸಿ ಆದೇಶಿಸಿದೆ.

| | |
|---|---|
| 1) ಜಂಟಿ ನಿರ್ದೇಶಕರು/ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ | – ಸಮಿತಿ ಅಧ್ಯಕ್ಷರು |
| 2) ಜಿಲ್ಲಾ ವ್ಯವಸ್ಥಾಪಕರು ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮ | – ಸದಸ್ಯರು |
| 3) ಜಿಲ್ಲಾ ಸಂಯೋಜಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ | – ಸದಸ್ಯ ಕಾರ್ಯದರ್ಶಿ |

<u>ಷರತ್ತುಗಳು:-</u>

1) ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಿದ ಫಲಾನುಭವಿಗಳ ಪಟ್ಟಿಗಳನ್ನು ನಿಗಮದ ಮಂಡಳ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ಯೋಜನೆಯನ್ನು ಜಾರಿಗೊಳಿಸುವುದು.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 37 ಎಸ್‌ಎಲ್‌ಪಿ 2015, ದಿನಾಂಕ:09-09-2015 ರಲ್ಲಿ ಹೊರಡಿಸಿರುವ ಉಳಿದ ಎಲ್ಲಾ ಷರತ್ತುಗಳು ಪಾಲಿಸತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2016, ದಿನಾಂಕ: 02-04-2016 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

31/8/2016
(ಗಿರಿಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
4) ಸಂಬಂಧಪಟ್ಟ ಎಲ್ಲಾ ಜಂಟಿ ನಿರ್ದೇಶಕರು / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ [ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮುಖಾಂತರ]
5) ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮ } ಆಡ್ಕರ್ ನಿಗಮದ ಮುಖಾಂತರ
6) ಎಲ್ಲಾ ಜಿಲ್ಲಾ ಸಂಯೋಜಕರು, ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ }
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1) ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
2) ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 & 9), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
4) ಸರ್ಕಾರದ ಅಧೀನ ಕಾರ್ಯದರ್ಶಿ-2 & 3, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು

* * * * *